**Akashvani : Bangalore**
**Regional Bulletin In Kannada**
**19.04.2024 / 14.30 hrs**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**19.04.2024 / 14.30 hrs**
**<><*<><>*><>**

<u>ಮುಖ್ಯಾಂಶಗಳು</u>

೧. ಲೋಕಸಭಾ ಚುನಾವಣೆ-೨೧ ರಾಜ್ಯಗಳಲ್ಲಿ ಮೊದಲ ಹಂತದ ಚುನಾವಣೆ ಪ್ರಗತಿಯಲ್ಲಿ- ಮಧ್ಯಾಹ್ನ ಒಂದು ಗಂಟೆಗೆ ತಮಿಳುನಾಡಿನಲ್ಲಿ ಶೇಕಡ ೩೯.೫೧, ಲಕ್ಷದ್ವೀಪ ಕೇಂದ್ರಾಡಳಿತ ಪ್ರದೇಶದಲ್ಲಿ ಶೇಕಡ ೨೯.೯೧, ಪಾಂಡಿಚೆರಿಯಲ್ಲಿ ಶೇಕಡ ೪೪.೯೫ರಷ್ಟು ಮತದಾನ ದಾಖಲು

೨. ಲೋಕಸಭಾ ಚುನಾವಣೆಯ ಎರಡನೇ ಹಂತದ ಮತದಾನ ಸಿದ್ಧತೆ ಕುರಿತು ಅಧಿಕಾರಿಗಳೊಂದಿಗೆ ಕೇಂದ್ರ ಮುಖ್ಯ ಚುನಾವಣಾ ಆಯುಕ್ತರ ಸಮಾಲೋಚನೆ

೩. ಮತಕ್ಷೇತ್ರ ದರ್ಶನ-ಮೈಸೂರು-ಕೊಡಗು ಲೋಕಸಭಾ ಕ್ಷೇತ್ರದ ಪರಿಚಯ

**<><*<><>*><>**

ವಿಶ್ವದ ಅತಿ ದೊಡ್ಡ ಪ್ರಜಾಪ್ರಭುತ್ವ ವ್ಯವಸ್ಥೆಯಾದ ಭಾರತದಲ್ಲಿ ಸಾರ್ವತ್ರಿಕ ಚುನಾವಣೆಯ ಮಹಾಪರ್ವ ಆರಂಭವಾಗಿದೆ. ೧೭ ರಾಜ್ಯಗಳು ಮತ್ತು ನಾಲ್ಕು ಕೇಂದ್ರಾಡಳಿತ ಪ್ರದೇಶಗಳಲ್ಲಿ ಇರುವ ೧೦೨ ಲೋಕಸಭಾ ಕ್ಷೇತ್ರಗಳಿಗೆ ಮೊದಲನೇ ಹಂತದ ಮತದಾನ ಪ್ರಗತಿಯಲ್ಲಿದೆ. ಮತದಾರರು ಸರತಿ ಸಾಲಿನಲ್ಲಿ ನಿಂತು ಮತ ಚಲಾಯಿಸುತ್ತಿದ್ದಾರೆ. ಇಂದು ಚುನಾವಣೆ ನಡೆಯುತ್ತಿರುವ ಬಹುತೇಕ ಎಲ್ಲ ರಾಜ್ಯಗಳಲ್ಲೂ ಉರಿ ಬಿಸಿಲಿನ ನಡುವೆಯೂ ಮತದಾರರು ಉತ್ಸಾಹದಿಂದ ತಮ್ಮ ಅಮೂಲ್ಯ ಹಕ್ಕನ್ನು ಚಲಾಯಿಸುತ್ತಿದ್ದಾರೆ. ಮುಕ್ತ ಮತ್ತು ನ್ಯಾಯಸಮ್ಮತ ಚುನಾವಣೆಗೆ ಆಯೋಗ ಸಕಲ ಸಿದ್ಧತೆ ಕೈಗೊಂಡಿದ್ದು, ಭಾರೀ ಬಿಗಿ ಭದ್ರತೆಯಲ್ಲಿ ಮತದಾನ ಪ್ರಗತಿಯಲ್ಲಿದೆ. ಮತದಾರರನ್ನು ಮತಗಟ್ಟೆಗೆ ಸೆಳೆಯಲು ಚುನಾವಣಾ ಆಯೋಗ ವಿಶೇಷ ಕ್ರಮಗಳನ್ನು ಕೈಗೊಂಡಿದೆ. ದೇಶದ ಉತ್ತರ ತುದಿಯ ಜಮ್ಮು-ಕಾಶ್ಮೀರದಿಂದ ಹಿಡಿದು ದಕ್ಷಿಣದ ತಮಿಳುನಾಡು ಸೇರಿದಂತೆ ಇಂದು ಚುನಾವಣೆ ನಡೆಯುತ್ತಿರುವ ರಾಜ್ಯಗಳಲ್ಲಿ ೮ ಕೋಟಿ ೪ ಲಕ್ಷ ಪುರುಷ ಮತದಾರರು ಮತ್ತು ೮ ಕೋಟಿ ೨೩ ಲಕ್ಷ ಮಹಿಳಾ ಮತದಾರರು ಸೇರಿದಂತೆ ಒಟ್ಟು ೧೬ ಕೋಟಿ ೬೩ ಲಕ್ಷ ಮತದಾರರು ಮೊದಲ ಹಂತದಲ್ಲಿ ಮತದಾನದ ಅರ್ಹತೆ ಪಡೆದಿದ್ದಾರೆ. ೩೫ ಲಕ್ಷದ ೬೭ ಸಾವಿರ ಯುವ ಜನರು ಈ ಹಂತದಲ್ಲಿ ಮೊದಲನೇ ಬಾರಿಗೆ ಮತ ಚಲಾಯಿಸುತ್ತಿದ್ದಾರೆ. ಇದಲ್ಲದೇ, ೨೦ ರಿಂದ ೨೯ರ ಪ್ರಾಯದ ಮೂರುವರೆ ಕೋಟಿಗೂ ಹೆಚ್ಚು ಯುವ ಮತದಾರರು ಮತದಾರರ ಪಟ್ಟಿಗೆ ತಮ್ಮ ಹೆಸರುಗಳನ್ನು ನೋಂದಾಯಿಸಿಕೊಂಡಿದ್ದಾರೆ. ಇಂದು ಮೊದಲನೇ ಹಂತದ ಚುನಾವಣೆ ನಡೆಯುತ್ತಿರುವ ಲೋಕಸಭಾ ಕ್ಷೇತ್ರಗಳಲ್ಲಿ ಒಟ್ಟು ೧ ಸಾವಿರದ ೬೨೫ ಅಭ್ಯರ್ಥಿಗಳ ರಾಜಕೀಯ ಭವಿಷ್ಯ ನಿರ್ಧಾರವಾಗಲಿದೆ. ಈ ಪೈಕಿ ಮಹಿಳಾ ಅಭ್ಯರ್ಥಿಗಳ ಸಂಖ್ಯೆ ೧೩೪. ಇಂದು ಚುನಾವಣೆ ನಡೆಯುತ್ತಿರುವ ರಾಜ್ಯಗಳಲ್ಲಿ ಒಂದು ಲಕ್ಷದ ೬೩ ಸಾವಿರ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ೧೮ ಲಕ್ಷ

ಚುನಾವಣಾ ಸಿಬ್ಬಂದಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಮೊದಲ ಹಂತದಲ್ಲಿ ಪರಿಶಿಷ್ಟ ಪಂಗಡಕ್ಕೆ ಮೀಸಲಾದ ೧೧ ಹಾಗೂ  ೧೮ ಪರಿಶಿಷ್ಟ ಜಾತಿಗೆ ಮೀಸಲಾದ ಲೋಕಸಭಾ ಕ್ಷೇತ್ರಗಳಲ್ಲಿ  ಮತದಾನ ನಡೆಯುತ್ತಿದೆ ಎಂದು ಕೇಂದ್ರ ಚುನಾವಣಾ ಆಯೋಗ ಮಾಹಿತಿ ನೀಡಿದೆ.ಇಂದು ಮಧ್ಯಾಹ್ನ ಒಂದು ಗಂಟೆ ಸುಮಾರಿಗೆ ಕೇಂದ್ರ ಚುನಾವಣಾ ಆಯೋಗ ಬಿಡುಗಡೆ ಮಾಡಿರುವ ಅಂದಾಜು ಶೇಕಡವಾರು ಮತದಾನದ ಮಾಹಿತಿಯಂತೆ ನೆರೆ ರಾಜ್ಯ ತಮಿಳುನಾಡಿನಲ್ಲಿ ಶೇಕಡ ೩೯.೫೧ ರಷ್ಟು, ಲಕ್ಷದ್ವೀಪ ಕೇಂದ್ರಾಡಳಿತ ಪ್ರದೇಶದಲ್ಲಿ ಶೇಕಡ ೨೯.೯೧ ರಷ್ಟು, ಪಾಂಡಿಚೆರಿಯಲ್ಲಿ ಶೇಕಡ ೪೪.೯೫ರಷ್ಟು ಮತದಾನ ದಾಖಲಾಗಿದೆ.

<><*<><>*><>

೨೦೨೪ರ ಲೋಕಸಭಾ ಚುನಾವಣೆಯ  ಎರಡನೇ ಹಂತದ ಮತದಾನ ಈ ತಿಂಗಳ ೨೬ ರಂದು ನಡೆಯಲಿದ್ದು, ಸಮಗ್ರ ಸಿದ್ಧತೆ ಕುರಿತು ಕೇಂದ್ರ ಮುಖ್ಯ ಚುನಾವಣಾ ಆಯುಕ್ತ ರಾಜೀವ್ ಕುಮಾರ್, ಚುನಾವಣಾ ಅಧಿಕಾರಿಗಳೊಂದಿಗೆ ಮಹತ್ವದ ಸಮಾಲೋಚನೆ ನಡೆಸಿದರು. ೧೩ ರಾಜ್ಯಗಳಲ್ಲಿ ಹರಡಿರುವ ೮೮ ಲೋಕಸಭಾ ಕ್ಷೇತ್ರಗಳಿಗೆ ಈ ಹಂತದಲ್ಲಿ ಮತದಾನ ನಡೆಯಲಿದ್ದು, ೨೫೦ ಚುನಾವಣಾ ವೀಕ್ಷಕರನ್ನು ನೇಮಿಸಲಾಗಿದೆ. ಈ ವೀಕ್ಷಕರೊಂದಿಗೆ ಮುಖ್ಯ ಚುನಾವಣಾ ಆಯುಕ್ತರು ವರ್ಚುಯಲ್ ಮೂಲಕ ಸಭೆ ನಡೆಸಿದರು. ಚುನಾವಣೆಗೆ ಸೂಕ್ತ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಬೇಕು. ದೇಶದ ಹಲವೆಡೆ ತಾಪಮಾನ ಹೆಚ್ಚಾಗಿದ್ದು, ಮತದಾರರಿಗೆ ತೊಂದರೆಯಾಗದಂತೆ ನೋಡಿಕೊಳ್ಳಬೇಕೆಂದು ಅವರು ಸೂಚಿಸಿದರು. ಮತದಾನಕ್ಕೆ ಅಗತ್ಯವಿರುವ ಇವಿಎಂ ಹಾಗೂ ವಿವಿ ಪ್ಯಾಟ್‌ಗಳನ್ನು ಸೂಕ್ತ ರೀತಿಯಲ್ಲಿ ಬಳಕೆಗೆ ವ್ಯವಸ್ಥೆ ಮಾಡಬೇಕು. ದುರ್ಬಲ ವರ್ಗದ ಮತದಾರರಲ್ಲಿ ಧೈರ್ಯ ತುಂಬುವ ಜೊತೆಗೆ ಸೂಕ್ಷ್ಮ ವೀಕ್ಷಕರನ್ನು ಸಮರ್ಥವಾಗಿ ಬಳಕೆ ಮಾಡಿಕೊಳ್ಳಬೇಕು ಎಂದು ಕೇಂದ್ರ ಮುಖ್ಯ ಚುನಾವಣಾ ಆಯುಕ್ತರು ಆದೇಶಿಸಿದ್ದಾರೆ.

<><*<><>*><>

ರಾಜ್ಯದಲ್ಲಿ ಮೊದಲ ಹಂತದ ಲೋಕಸಭಾ ಚುನಾವಣೆ ಮತದಾನದ ದಿನಾಂಕ ಸಮೀಪಿಸುತ್ತಿರುವ ಹಿನ್ನೆಲೆಯಲ್ಲಿ ಚುನಾವಣಾ ಸಿಬ್ಬಂದಿ ಚೆಕ್‌ಪೋಸ್ಟ್‌ಗಳಲ್ಲಿ ಕಣ್ಗಾವಲು ಚುರುಕುಗೊಳಿಸಿದ್ದಾರೆ.  ಯಾದಗಿರಿ ಜಿಲ್ಲೆಯಲ್ಲಿ ದಾಖಲೆ ಇಲ್ಲದೇ ಸಾಗಿಸುತ್ತಿದ್ದ ೫ ಲಕ್ಷ ೪೩ ಸಾವಿರದ ೭೫೦ ರೂಪಾಯಿ ನಗದು ಹಣವನ್ನು ವಶ ಪಡಿಸಿಕೊಳ್ಳಲಾಗಿದೆ. ಚುನಾವಣಾ ದೂರುಗಳು ಪರಿಶೀಲನೆಗಾಗಿ ವೀಕ್ಷಕರು ತಮ್ಮ ನಿಯೋಜಿತ ಮತಕ್ಷೇತ್ರಗಳಿಗೆ ಆಗಮಿಸುತ್ತಿದ್ದಾರೆ. ಉತ್ತರ ಕನ್ನಡ ಜಿಲ್ಲೆಯಲ್ಲಿ ಲೋಕಸಭಾ ಚುನಾವಣೆ ಸಂಬಂಧದ ವೀಕ್ಷಕರಾಗಿ ರಾಜೀವ್ ರತನ್ ಅವರು ಇಂದು ಕಾರವಾರಕ್ಕೆ ಆಗಮಿಸಿದರು. ರಾಯಚೂರು ಲೋಕಸಭಾ ಕ್ಷೇತ್ರಕ್ಕೆ ಅಜಯ್ ಪ್ರಕಾಶ್ ಚುನಾವಣಾ ವೀಕ್ಷಕರಾಗಿ ನಿಯೋಜಿತರಾಗಿದ್ದಾರೆ. ಈ ಲೋಕಸಭಾ ಮತಕ್ಷೇತ್ರಗಳ ಸಾರ್ವಜನಿಕರು ಚುನಾವಣಾ ಸಂಬಂಧದ ದೂರುಗಳನ್ನು ವೀಕ್ಷಕರಿಗೆ ಖುದ್ದಾಗಿ ಸಲ್ಲಿಸಬಹುದು ಎಂದು ಜಿಲ್ಲಾ ಚುನಾವಣಾಧಿಕಾರಿಗಳು ತಿಳಿಸಿದ್ದಾರೆ. ಬೆಂಗಳೂರು ನಗರದ ಲಾಲ್‌ಬಾಗ್ ಉದ್ಯಾನದಲ್ಲಿ ಮತ್ತು ಗದಗ್‌ನಲ್ಲಿ ಇಂದು ಮತದಾನ ಜಾಗೃತಿ ಕಾಲ್ನಡಿಗೆ ಜಾಥಾಗಳನ್ನು ಹಮ್ಮಿಕೊಳ್ಳಲಾಗಿತ್ತು. ಸಾರ್ವಜನಿಕರಿಗೆ ಮತದಾನದ ಪ್ರತಿಜ್ಞಾ ವಿಧಿಯನ್ನು ಬೋಧಿಸಲಾಯಿತು. ಚಿತ್ರದುರ್ಗ ಜಿಲ್ಲಾ ಸ್ವೀಪ್ ಸಮಿತಿ ಇಂದು ಮತದಾನ ಜಾಗೃತಿಗಾಗಿ ನಗರದ ಪ್ರಮುಖ ರಸ್ತೆಗಳಲ್ಲಿ ಮ್ಯಾರಥಾನ್ ಓಟವನ್ನು ಆಯೋಜಿಸಿತ್ತು.  ೧೦೦ಕ್ಕು ಹೆಚ್ಚು ಕೀಡಾಪಟುಗಳು ಭಾಗವಹಿಸಿದ್ದರು. ವಿಜಯಪುರ, ರಾಯಚೂರು,

ಕೊಡಗು ಜಿಲ್ಲೆಗಳಲ್ಲೂ ಚುನಾವಣಾ ಸ್ವೀಪ್ ಸಮಿತಿಗಳು ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದವು ಎಂದು ನಮ್ಮ ಜಿಲ್ಲಾ ಪ್ರತಿನಿಧಿಗಳು ವರದಿ ಮಾಡಿದ್ದಾರೆ.

**<><*<><>*><>**

ಇಂದು ಮೈಸೂರು-ಕೊಡಗು ಲೋಕಸಭಾ ಮತಕ್ಷೇತ್ರದ ಪರಿಚಯ ವರದಿಯನ್ನು ಸಿದ್ಧಪಡಿಸಿರುವವರು : ನಮ್ಮ ಜಿಲ್ಲಾ ಪ್ರತಿನಿಧಿ, ಪ್ರಶಾಂತ್ ಎನ್. ಸಾಂಸ್ಕೃತಿಕ ನಗರಿ, ಅರಮನೆಗಳ ನಗರಿ ಹಾಗೂ ಸ್ವಚ್ಛ ನಗರಿ ಎಂಬ ಹಲವು ಬಿರುದುಗಳನ್ನು ಹೊಂದಿರುವ ಮೈಸೂರು ಜಿಲ್ಲೆಯ ೬ ವಿಧಾನಸಭಾ ಕ್ಷೇತ್ರಗಳು ಹಾಗೂ ಕಾವೇರಿ ಉಗಮ ಸ್ಥಾನವಾದ ಕೊಡಗು ಜಿಲ್ಲೆಯ ಎರಡು ವಿಧಾನಸಭಾ ಕ್ಷೇತ್ರಗಳು ಸೇರಿ  ಒಟ್ಟು ೮ ವಿಧಾನಸಭಾ ಕ್ಷೇತ್ರಗಳನ್ನು ಒಳಗೊಂಡಿದೆ, ಮೈಸೂರು- ಕೊಡಗು ಲೋಕಸಭಾ ಕ್ಷೇತ್ರ.

ಕಳೆದೆರಡು ಲೋಕಸಭಾ ಚುನಾವಣೆಗಳಿಂದ ಬಿಜೆಪಿ ಭದ್ರಕೋಟೆ ಆಗಿರುವ ಮೈಸೂರು ಕೊಡಗು ಲೋಕಸಭಾ ಕ್ಷೇತ್ರ ಈ ಬಾರಿ ಬಿಜೆಪಿ ಹಾಗೂ  ಕಾಂಗ್ರೆಸ್ ನಡುವಿನ ಜಿದ್ದಾಜಿದ್ದಿಯಾಗಿ ನಡೆಯುವ ಕ್ಷೇತ್ರವಾಗಿದೆ. ಮುಖ್ಯಮಂತ್ರಿಗಳ ತವರು ಜಿಲ್ಲೆ ಎನ್ನುವುದು ಒಂದಾದರೆ, ಜೆಡಿಎಸ್ ಜೊತೆಗೆ ಮೈತ್ರಿ ಮಾಡಿಕೊಂಡಿರುವ ಬಿಜೆಪಿ ಈ ಬಾರಿ ತನ್ನ ಅಭ್ಯರ್ಥಿಯನ್ನು ಬದಲಿಸಿರುವುದು ಸಹ ತೀವ್ರ ಕುತೂಹಲಕ್ಕೆ ಕಾರಣವಾಗಿದೆ.  ಬಿಜೆಪಿಯಿಂದ ಮೈಸೂರು ರಾಜ ಮನೆತನದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಅವರಿಗೆ ಟಿಕೆಟ್ ನೀಡಲಾಗಿದೆ, ಕಾಂಗ್ರೆಸ್‌ನಿಂದ ಪಕ್ಷದ ವಕ್ತಾರ ಎಂ ಲಕ್ಷ್ಮಣ್ ಗೆ ಟಿಕೆಟ್ ನೀಡಲಾಗಿದ್ದು, ಈ ಇಬ್ಬರು ಅಭ್ಯರ್ಥಿಗಳ ನಡುವೆ ನೇರ ನೇರ ಹಣಾಹಣಿ ನಿರೀಕ್ಷಿತ. ಎರಡೂ ಪಕ್ಷಗಳ ನಾಯಕರು ತಮ್ಮ ಅಭ್ಯರ್ಥಿಗಳ ಪರವಾಗಿ ಅಬ್ಬರದ ಪ್ರಚಾರ ನಡೆಸುತ್ತಿದ್ದಾರೆ. ಈಗಾಗಲೇ ಬಿಜೆಪಿ ಜೆಡಿಎಸ್ ಮೈತ್ರಿ ಅಭ್ಯರ್ಥಿ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಪರವಾಗಿ ಪ್ರಧಾನಿ ನರೇಂದ್ರ ಮೋದಿ,  ಜೆಡಿಎಸ್ ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಹಾಗೂ ಮಾಜಿ ಪ್ರಧಾನಿ ಹೆಚ್ ಡಿ ದೇವೇಗೌಡ, ಮಾಜಿ ಮುಖ್ಯಮಂತ್ರಿಗಳಾದ ಬಿ ಎಸ್ ಯಡಿಯೂರಪ್ಪ ಮತ್ತು ಹೆಚ್ ಡಿ ಕುಮಾರಸ್ವಾಮಿಯವರು ಪ್ರಚಾರ ನಡೆಸಿದ್ದಾರೆ. ಕಾಂಗ್ರೆಸ್ ಅಭ್ಯರ್ಥಿಯ ಪರವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಮಾಜಿ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಸೇರಿದಂತೆ ಹಲವು ನಾಯಕರು ಮೂರು ಸುತ್ತಿನ ಅಬ್ಬರದ ಪ್ರಚಾರ ನಡೆಸಿದ್ದಾರೆ. "ಮೈಸೂರು-ಕೊಡಗು ಲೋಕಸಭಾ ಕ್ಷೇತ್ರ", ಒಟ್ಟು ೮ ವಿಧಾನಸಭಾ ಕ್ಷೇತ್ರಗಳನ್ನು ಒಳಗೊಂಡಿದೆ. ಮೈಸೂರು ನಗರದ ಕೃಷ್ಣರಾಜ, ಚಾಮರಾಜ, ನರಸಿಂಹರಾಜ ಕ್ಷೇತ್ರಗಳು ಒಳಗೊಂಡು, ಗ್ರಾಮಾಂತರ ಭಾಗದ ಹುಣಸೂರು, ಪಿರಿಯಾಪಟ್ಟಣ, ಚಾಮುಂಡೇಶ್ವರಿ ಹಾಗೂ ಕೊಡಗು ಜಿಲ್ಲೆಯ ಮಡಿಕೇರಿ ಮತ್ತು ವಿರಾಜಪೇಟೆ ಎರಡು ಕ್ಷೇತ್ರಗಳು ಬರುತ್ತವೆ. ಒಟ್ಟು ೧೭ ಚುನಾವಣೆಗಳಲ್ಲಿ ೧೨ ಚುನಾವಣೆಗಳನ್ನು ಕಾಂಗ್ರೆಸ್ ಗೆದ್ದಿದ್ದರೆ. ೪ ಬಾರಿ ಬಿಜೆಪಿ, ಉಳಿದಂತೆ ಒಮ್ಮೆ ಕಿಸಾನ್ ಮಜ್ದೂರ್ ಸಭಾ ಗೆಲುವು ಸಾಧಿಸಿದೆ. ಈ ಲೋಕಸಭಾ ಕ್ಷೇತ್ರದಲ್ಲಿ ೨೦ ಲಕ್ಷದ ೭೨ ಸಾವಿರದ ೩೩೭ ಮತದಾರರಿದ್ದು, ಈ ಪೈಕಿ  ಪುರುಷ ಮತದಾರರು  ೧೦ ಲಕ್ಷದ ೧೭ ಸಾವಿರದ ೧೨೦, ಮಹಿಳೆ ಮತದಾರರು  ೧೦ ಲಕ್ಷದ ೫೫ ಸಾವಿರದ ೩೫ ಹಾಗೂ  ತೃತೀಯ ಲಿಂಗ ೧೮೨ ಮತದಾರರಿದ್ದಾರೆ. ಮಡಿಕೇರಿ ವಿಧಾನಸಭಾ ಕ್ಷೇತ್ರದಲ್ಲಿ ೨೭೩ ಮತಗಟ್ಟೆಗಳಿದ್ದು, ಉಳಿದಂತೆ  ವಿರಾಜಪೇಟೆ ೨೭೩, ಪಿರಿಯಾಪಟ್ಟಣ ೨೩೫, ಹುಣಸೂರು ೨೭೪, ಚಾಮುಂಡೇಶ್ವರಿ ೩೪೩, ಕೃಷ್ಣರಾಜ ೨೬೫, ಚಾಮರಾಜ ೨೪೮, ನರಸಿಂಹರಾಜ ೨೯೧ಮತಗಟ್ಟೆ ಹಾಗೂ ಆಕ್ಸಿಲರಿ ಮತಗಟ್ಟೆಗಳು ೧೦ ಸೇರಿ ಒಟ್ಟು ೨೨೦೨ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ರಾಜ್ಯದಲ್ಲಿ ಮೊದಲ ಹಂತದಲ್ಲಿ ಏಪ್ರಿಲ್ ೨೬ ರಂದು ಮೈಸೂರು-ಕೊಡಗು ಲೋಕಸಭಾ ಕ್ಷೇತ್ರದಲ್ಲಿ ಚುನಾವಣೆ

ನಡೆಯಲಿದೆ. ಮತ ಕ್ಷೇತ್ರದರ್ಶನ ವಿಭಾಗದಲ್ಲಿ ಇದುವರೆಗೆ ಮೈಸೂರು-ಕೊಡಗು ಲೋಕಸಭಾ ಕ್ಷೇತ್ರದ ಪರಿಚಯ ಕೇಳಿದಿರಿ....

**<><*<><>*><>**

ವಿಶ್ವದ ಗಮನ ಸೆಳೆಯುವ ಸಾಮರ್ಥ್ಯದ ಮಹಾ ಚುನಾವಣೆಯನ್ನು ನ್ಯಾಯಸಮ್ಮತ ಮತ್ತು ಪಾರದರ್ಶಕವಾಗಿ ನಡೆಸುವ ಸಲುವಾಗಿ ಭಾರತ ಚುನಾವಣಾ ಆಯೋಗ ಹಲವು ಕ್ರಮಗಳನ್ನು ಕೈಗೊಂಡಿದೆ. ಇಂದು ಬೆಳಗ್ಗೆ ೭ ಗಂಟೆಯಿಂದ ಜೂನ್ ೧ರ ಸಂಜೆ ೬.೩೦ರ ನಡುವಿನ ಅವಧಿಯಲ್ಲಿ ಮಾಧ್ಯಮಗಳು, ಚುನಾವಣಾ ಪೂರ್ವ ಸಮೀಕ್ಷೆ, ಮತಗಟ್ಟೆ ಸಮೀಕ್ಷೆ ಸೇರಿದಂತೆ ಚುನಾವಣೆಗೆ ಸಂಬಂಧಪಟ್ಟ ಯಾವುದೇ ಸಮೀಕ್ಷೆಯ ಫಲಿತಾಂಶ ಪ್ರಸಾರ ಅಥವಾ ಪ್ರಕಟಣೆಯನ್ನು ನಿರ್ಬಂಧಿಸಿ, ಕೇಂದ್ರ ಚುನಾವಣಾ ಆಯೋಗ ಆದೇಶ ಹೊರಡಿಸಿದೆ. ರಾಜ್ಯದಲ್ಲಿರುವ ವಿದ್ಯುನ್ಮಾನ, ಮುದ್ರಣ ಮತ್ತು ಇತರ ಎಲ್ಲ ಮಾಧ್ಯಮಗಳಿಗೂ ಈ ಆದೇಶ ಅನ್ವಯವಾಗುತ್ತದೆ ಎಂದು ರಾಜ್ಯ ಉಪಮುಖ್ಯ ಚುನಾವಣಾಧಿಕಾರಿ ನವೀನ್ ಜೋಸೇಫ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**